DECEMBER 25, 2025

AKASHAVANI - DHARWAD

PRADESH SAAMACHARA (KANNADA) 07.05 A.M

<><><>

ಮುಖ್ಯಾಂಶಗಳು

- ಚಿತ್ರದುರ್ಗದ ಹಿರಿಯೂರು ಬಳಿ ಖಾಸಗಿ ಬಸ್ ಅಪಘಾತ; 11ಕ್ಕೂ ಹೆಚ್ಚು ಪ್ರಯಾಣಿಕರು ಸಜೀವ ದಹನದ ಶಂಕೆ.
- ಮಂಗನ ಕಾಯಿಲೆ ನಿಯಂತ್ರಣಕ್ಕೆ ಕ್ರಮ; ಉತ್ತರ ಕನ್ನಡ ಜಿಲ್ಲೆಯ ಶಿರಸಿಯಲ್ಲಿ ನೂತನ ಪ್ರಯೋಗಾಲಯ ಶೀಘ್ರದಲ್ಲೇ ಪ್ರಾರಂಭ.
- ಗ್ರಾಹಕರ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಲು ರಾಜ್ಯ ಗ್ರಾಹಕ ವ್ಯವಹಾರಗಳ ಇಲಾಖೆಯಿಂದ ಯೋಜನೆ.
- ಇಂದು ನಾಡಿನಾದ್ಯಂತ ಸಂಭ್ರಮದ ಕ್ರಿಸ್ಮಸ್ ಆಚರಣೆ.

<><><>

ಈಗ ವಾರ್ತೆಗಳ ವಿವರ

<><><>

ಬೆಂಗಳೂರಿನಿಂದ ಉತ್ತರಕನ್ನಡ ಜಿಲ್ಲೆಯ, ಗೋಕರ್ಣಕ್ಕೆ ತೆರಳುತ್ತಿದ್ದ ಖಾಸಗಿ ಬಸ್, ಚಿತ್ರದುರ್ಗ ಜಿಲ್ಲೆ, ಹಿರಿಯೂರು ತಾಲೂಕಿನ, ಗೊರ್ಲತ್ತು ಗ್ರಾಮದ ಸಮೀಪ, ಮಧ್ಯರಾತ್ರಿ 12 ಗಂಟೆಗೆ ಅಪಘಾತಕ್ಕೀಡಾಗಿದ್ದು, 11ಕ್ಕೂ ಹೆಚ್ಚು ಜನ ಸಜೀವ ದಹನಗೊಂಡು, 18 ಜನ ಗಾಯಗೊಂಡಿದ್ದಾಗಿ, ಪ್ರಾಥಮಿಕ ವರದಿಗಳು ತಿಳಿಸಿವೆ. ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಸಂಭವಿಸಿದ, ಖಾಸಗಿ ಬಸ್ ಹಾಗೂ ಕಂಟೇನರ್ ಮಧ್ಯದ ಡಿಕ್ಕಿಯಲ್ಲಿ, ಬೆಂಕಿಯ ಜ್ವಾಲೆ ಹಬ್ಬಿ, 11ಕ್ಕೂ ಹೆಚ್ಚು ಜನ, ಸ್ಥಳದಲ್ಲೇ ಸುಟ್ಟು ಕರಕಲಾಗಿದ್ದಾರೆ ಎನ್ನಲಾಗಿದೆ. ಪೊಲೀಸ್ ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ, ಹರಸಾಹಸಪಟ್ಟು, ಬೆಂಕಿಯನ್ನು ನಂದಿಸಿದ್ದಾರೆ. ಉತ್ತರಪ್ರದೇಶದ ಕಂಟೇನರ್ ಚಾಲಕ, ಕುಲದೀಪ ಯಾದವ್ ಸಹ ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಬಸ್ ಚಾಲಕ ಮತ್ತು ಕ್ಲೀನರ್ ಬದುಕಿ ಉಳಿದಿದ್ದಾರೆ. ಗಾಯಗೊಂಡ 12 ಜನರ ಆರೋಗ್ಯ ಸ್ಥಿತಿ ಗಂಭೀರವಾಗಿದ್ದು, 6 ಜನರನ್ನು ಬೆಂಗಳೂರಿನ ಆಸ್ಪತ್ರೆಗೆ ಕರೆದೊಯ್ಯಲಾಗುತ್ತಿದ್ದು, 6 ಜನರಿಗೆ ತುಮಕೂರು ಜಿಲ್ಲೆ, ಹಿರಿಯೂರು ಮತ್ತು ಶಿರಾ ಆಸ್ಪತ್ರೆಗಳಿಗೆ ದಾಖಲಿಸಲಾಗಿದ್ದು, ತುರ್ತು ಚಿಕಿತ್ಸಾ ಘಟಕದಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಲಾಗುತ್ತಿದೆ. ಗೋಕರ್ಣದ 25 ಜನ ಹಾಗೂ ಕುಮಟಾದ ಮೂವರು ಸೇರಿದಂತೆ, ಒಟ್ಟು 29 ಜನ ಪ್ರಯಾಣಿಕರು ಬಸ್‌ನಲ್ಲಿ ಪ್ರಯಾಣಿಸುತ್ತಿದ್ದರು ಎಂದು, ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್‌ಕುಮಾರ ಭಂಡಾರು ತಿಳಿಸಿದ್ದಾರೆ. ತುಮಕೂರಿನಿಂದ ಶಿರಾ ವರೆಗೆ 30 ಕಿಲೋ ಮೀಟರ್ ಉದ್ದಕ್ಕೂ ಸಂಚಾರ ದಟ್ಟಣೆ ಉಂಟಾಗಿದ್ದು, ವಾಹನಗಳು ರಸ್ತೆ ಮಧ್ಯೇ ಸಿಲುಕಿವೆ.

<><><>

ಮಲೆನಾಡು ಮತ್ತು ಕರಾವಳಿ ಭಾಗದಲ್ಲಿ ಆತಂಕ ಮೂಡಿಸಿರುವ ಮಂಗನ ಕಾಯಿಲೆ ನಿಯಂತ್ರಿಸಲು ಹಾಗೂ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವ ಕುರಿತು ಆರೋಗ್ಯ ಖಾತೆ ಸಚಿವ ದಿನೇಶ ಗುಂಡೂರಾವ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಯಿತು. ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಕುರಿತು ಸಾಮಾಜಿಕ ಜಾಲತಾಣದ ಮೂಲಕ ಮಾಹಿತಿ ಹಂಚಿಕೊಂಡಿರುವ ಸಚಿವರು, ಪ್ರಸ್ತುತ ಶಿವಮೊಗ್ಗದಲ್ಲಿ ಮಾತ್ರ ಕೆ.ಎಫ್.ಡಿ ಪರೀಕ್ಷಾ ಕೇಂದ್ರವಿದ್ದು, ಅಲ್ಲಿನ ಒತ್ತಡವನ್ನು ಕಡಿಮೆ ಮಾಡಲು ಉತ್ತರ ಕನ್ನಡ ಜಿಲ್ಲೆಯ ಶಿರಸಿಯಲ್ಲಿ ನೂತನ ಪ್ರಯೋಗಾಲಯ ಪ್ರಾರಂಭಿಸಲಾಗುತ್ತಿದೆ. ಇದರಿಂದ ಶಿರಸಿ

ಹಾಗೂ ಸಿದ್ದಾಪುರ ಭಾಗದ ಜನರಿಗೆ ತ್ವರಿತವಾಗಿ ಪರೀಕ್ಷಾ ವರದಿ ಲಭ್ಯವಾಗಲಿದೆ. ಮಂಗನ ಕಾಯಿಲೆ ಪೀಡಿತರಿಗೆ ಉಚಿತ ಚಿಕಿತ್ಸೆ ಹಾಗೂ ಅಂಬುಲೆನ್ಸ್ ವ್ಯವಸ್ಥೆ ಮಾಡಲಾಗುವುದು. ಗುಣಮುಖರಾದ ನಂತರವೂ 21 ದಿನಗಳ ಕಾಲ ಆರೋಗ್ಯ ಇಲಾಖೆ ಅವರ ಮೇಲೆ ನಿಗಾ ಇಡಲಿದೆ ಎಂದು ತಿಳಿಸಿದ್ದಾರೆ.

<><><>

ಮೈಸೂರು ಜಿಲ್ಲೆಯಲ್ಲಿ ತಾಯಿ ಮರಣ ಪ್ರಮಾಣವು ಗಣನೀಯವಾಗಿ ಇಳಿಕೆಯಾಗಿರುವುದು ಅತ್ಯಂತ ಸಂತಸದ ಸಂಗತಿ. ಗರ್ಭಿಣಿಯರ ಆರೈಕೆಗಾಗಿ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೊಳಿಸಿದ ಮೈಸೂರು ಜಿಲ್ಲೆಯ ಆರೋಗ್ಯ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯ ಸಾಧನೆಯು ಇಡೀ ರಾಜ್ಯಕ್ಕೆ ಮಾದರಿಯಾಗಿದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ ಗುಂಡೂರಾವ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದ ಮೂಲಕ ಮಾಹಿತಿ ಹಂಚಿಕೊಂಡಿರುವ ಸಚಿವರು, ಜಿಲ್ಲಾಡಳಿತವು, ತಾಯಿ ಕಾರ್ಡ್ ವಿತರಣೆ, ತುರ್ತು ವಾಹನಗಳ ಸೌಲಭ್ಯ ಮತ್ತು ಖಾಸಗಿ ಆಸ್ಪತ್ರೆಗಳ ಮೇಲೆ ನಿರಂತರ ನಿಗಾ ವಹಿಸುವ ಮೂಲಕ, ತಾಯಿ ಮರಣ ಪ್ರಮಾಣ ತಡೆಗಟ್ಟಲು ಶ್ರಮಿಸುತ್ತಿರುವುದು ಶ್ಲಾಘನೀಯ. ಇದೇ ರೀತಿಯಾಗಿ ಮುನ್ನೆಚ್ಚರಿಕೆ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಪರಿಣಾಮಕಾರಿಯಾಗಿ ಅನು ಷ್ಠಾನಗೊಳಿಸುವ ಮೂಲಕ 'ತಾಯಿ ಮರಣ ಮುಕ್ತ ಕರ್ನಾಟಕ' ನಿರ್ಮಿಸಲು ತಾವು ಬದ್ಧರಾಗಿರುವುದಾಗಿ ತಿಳಿಸಿದರು.

<><><>

ಗ್ರಾಹಕರ ಹಕ್ಕುಗಳ ಸಂರಕ್ಷಣೆ ಕುರಿತು, ರಾಜ್ಯ ಮಟ್ಟದಲ್ಲಿ ಕಾರ್ಯಾಗಾರಗಳನ್ನು ಆಯೋಜಿಸಬೇಕು. ಗ್ರಾಹಕರಿಗೆ ಪ್ರಕರಣಗಳನ್ನು ದಾಖಲಿಸುವ ಹಾಗೂ ಬಿಲ್ಲು ಮತ್ತು ರಸೀದಿಗಳನ್ನು ಕಡ್ಡಾಯವಾಗಿ ಪಡೆಯುವ ಬಗ್ಗೆ ಅರಿವು ಮೂಡಿಸಬೇಕು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ರಾಷ್ಟ್ರೀಯ ಗ್ರಾಹಕರ ದಿನದ ಪ್ರಯುಕ್ತ ಬೆಂಗಳೂರಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚೆಗೆ ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಸೈಬರ್ ಅಪರಾಧಗಳನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮವಹಿಸುವಂತೆ ಸೂಚಿಸಲಾಗುವುದು. ರಾಜ್ಯದಲ್ಲಿ ಶೇಕಡ 97 ರ ಷ್ಟು ಗ್ರಾಹಕರ ವ್ಯಾಜ್ಯಗಳನ್ನು ಬಗೆಹರಿಸಲಾಗಿದ್ದು, ಕೇವಲ ಶೇಕಡ 3ರ ಷ್ಟು ಪ್ರಕರಣಗಳು ಬಾಕಿ ಉಳಿದಿವೆ ಎಂದು ತಿಳಿಸಿದರು.

<><><>

ಇಂದು ಮಾಜಿ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ದಿನ. ಈ ದಿನವನ್ನು ಸುಶಾಸನ ದಿನವನ್ನಾಗಿ ಆಚರಿಸಲಾಗುತ್ತದೆ. ಹೊಣೆಗಾರಿಕೆ, ಪಾರದರ್ಶಕತೆ ಮತ್ತು ನಾಗರಿಕ ಕೇಂದ್ರಿತ ಸಾರ್ವಜನಿಕ ಸೇವೆಯನ್ನು ಉತ್ತೇಜಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ದಿನದ ಅಂಗವಾಗಿ ಹುಬ್ಬಳ್ಳಿಯಲ್ಲಿ ಇಂದು ಸಂಜೆ 5 ಗಂಟೆಗೆ, 'ಸುಶಾಸನ ದಿನಾಚರಣೆ–ಅಟಲ್ ಜಿ ಸ್ಮರಣೆ ಕಾರ್ಯಕ್ರಮ ಆಯೋಜಿಸಲಾಗಿದ್ದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಅಟಲ್ ಜೀ ಅವರ ಜೀವನ ಚರಿತ್ರೆಯ 'ಮೈ ಹೂಂ ಅಟಲ್ ಚಲನಚಿತ್ರ ಪ್ರದರ್ಶಿಸಲಾಗುವುದು.

<><><>

ಈಗ ಪ್ರಕಟಣೆ.

ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು..

<><><>

( 40 ಸೆಕೆಂದುಗಳು)

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಇಂದು ಏಸು ಕ್ರಿಸ್ತರ ಜನ್ಮ ದಿನ. ನಾಡಿನಾದ್ಯಂತ ಕ್ರಿಶ್ಚಿಯನ್ ಬಾಂಧವರು ಕ್ರಿಸ್ಮಸ್ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸುತ್ತಿದ್ದಾರೆ. ಕ್ರೈಸ್ತ ಬಾಂಧವರ ಪವಿತ್ರ ಹಬ್ಬ ಕ್ರಿಸ್ಮಸ್ ಹಬ್ಬದ ಮುನ್ನಾ ದಿನವಾದ ನಿನ್ನೆ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಹಬ್ಬದ ಸಂಭ್ರಮ, ಸಡಗರ ಮನೆ ಮಾಡಿದೆ. ಮನೆ ಹಾಗೂ ಚರ್ಚಗಳಲ್ಲಿ ಗೋದಲಿ ನಿರ್ಮಿಸಿ ಅಲಂಕರಿಸುವುದು ಕ್ರಿಸ್ಮಸ್ ಆಚರಣೆಯ ಪ್ರಮುಖ ಆಕರ್ಷಣೆಯಾಗಿದೆ. ಈ ಹಿನ್ನೆಲೆಯಲ್ಲಿ ಪುಟ್ಟ ಗೋದಲಿಯೊಳಗೆ ಆಡು, ಕುರಿ, ದನ–ಕರುಗಳ ಗೊಂಬೆಗಳನ್ನು ಜೋಡಿಸಲು ಮಾರುಕಟ್ಟೆಯಲ್ಲಿ ಗೋದಲಿಗಳ ಖರೀದಿ ನಡೆದಿತ್ತು. ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನ ವೈ.ಹುಣಸೇನಹಳ್ಳಿ ಬಳಿಯ ಕಡಶಾನ ಹಳ್ಳಿಯಲ್ಲಿ ಸಾವಿರದ 668 ರಲ್ಲಿ ನಿರ್ಮಿಸಿರುವ ಶತಮಾನಗಳ ಇತಿಹಾಸವಿರುವ ಚರ್ಚ್ ಎಂಬ ಹೆಗ್ಗಳಿಕೆಗೆ ಪಾತ್ರವಾದ, ಸಂತ ಆಂತೋಣಿ ಚರ್ಚ್ ಪುರಾತನ ಗೋಥಿಕ್ ಶೈಲಿಯಲ್ಲಿ ನಿರ್ಮಾಣವಾಗಿದೆ. ಈ ಚರ್ಚ್‌ನಲ್ಲಿಯೂ ಕ್ರಿಸ್ಮಸ್ ಹಬ್ಬದ ಸಂಭ್ರಮ ಕಳೆಗಟ್ಟಿದೆ.

<><><>

ಮಕ್ಕಳ ಹಕ್ಕುಗಳ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮಕ್ಕಳು ತಮ್ಮ ಸಮಸ್ಯೆಗಳನ್ನು ಹಂಚಿಕೊಂಡಾಗ, ಸೂಕ್ತ ಸೌಲಭ್ಯಗಳನ್ನು ನೀಡುವಂತೆ ಹಾಗೂ ಅವರ ಸಮಸ್ಯೆಗಳನ್ನು ಬಗೆಹರಿಸುವಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಕ್ಕಳಿಂದ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು, ಮಕ್ಕಳು ಪ್ರಶ್ನಿಸುವ ಗುಣವನ್ನು ಬೆಳೆಸಿಕೊಳ್ಳುವುದರಿಂದ ತಮ್ಮ ಹಕ್ಕನ್ನು ತಾವು ಕೇಳಿ ಪಡೆಯಲು ಸಾಧ್ಯ. ಮಕ್ಕಳಿಗೆ 18 ವರ್ಷ ಆಗುವವರೆಗೆ ಆರೋಗ್ಯ, ಶಿಕ್ಷಣ, ರಕ್ಷಣೆ ದೊರಕಬೇಕು. ವಿದ್ಯಾರ್ಥಿಯಾದಾಗಿನಿಂದಲೇ ಸಮಾಜದ ಕುರಿತು ಚಿಂತನೆ, ಕಾಳಜಿ ವಹಿಸಬೇಕು. ಇದರಿಂದ ದೇಶ ಅಭಿವೃದ್ಧಿ ಹೊಂದುತ್ತದೆ ಎಂದರು.

<><><>

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ವಿಜಯನಗರದಲ್ಲಿ ಯಶಸ್ವಿಯಾಗಿ ನಿರ್ವಹಿಸಲಾಯಿತು ಎಂದು ಡಾಕ್ಟರ್ ಎಲ್.ಆರ್.ಶಂಕರ್ ನಾಯ್ಕ ತಿಳಿಸಿದ್ದಾರೆ. ಡಿಸೆಂಬರ್ 21 ರಂದು ಪೋಲಿಯೋ ಲಸಿಕೆ ಬೂತ್‌ಗಳಲ್ಲಿ 1 ಲಕ್ಷ 27 ಸಾವಿರದ 366 ಮಕ್ಕಳಿಗೆ ಮತ್ತು 22 ರಿಂದ 24 ರ ವರೆಗೆ ಮನೆ ಮನೆಗೆ ಭೇಟಿ ನೀಡಿ 6 ಸಾವಿರದ 843 ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಜಿಲ್ಲೆಯಲ್ಲಿ ಒಟ್ಟು 1 ಲಕ್ಷ 34 ಸಾವಿರದ 209 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಲಾಗಿದೆ ಎಂದು ಮಾಹಿತಿ ನೀಡಿದರು.

<><><>

ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಹೂವಿನ ಹಿಪ್ಪರಗಿ ಗ್ರಾಮದಲ್ಲಿ ಸುಮಾರು 2 ಎಕರೆ ಸರ್ಕಾರಿ ಜಾಗದಲ್ಲಿ ಅನಧಿಕೃತವಾಗಿ ಮನೆಗಳನ್ನು ನಿರ್ಮಿಸಿಕೊಂಡು ಹಲವು ದಶಕಗಳಿಂದ ಶಾಶ್ವತ ನಿವೇಶನದ ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿದ್ದ ಕುಟುಂಬಗಳಿಗೆ ಸರ್ಕಾರದಿಂದ ಮಹತ್ವದ ಪರಿಹಾರ ಲಭಿಸಿದೆ. ಈ ಪ್ರದೇಶವನ್ನು ಕಾಗೋಡು ತಿಮ್ಮಪ್ಪ ನಗರ ಕಂದಾಯ ಉಪಗ್ರಾಮವೆಂದು ಘೋಷಿಸಿ, ಹಕ್ಕುಪತ್ರ ವಿತರಿಸಲು ಸರ್ಕಾರವು ಅಂತಿಮ ಅಧಿಸೂಚನೆಯನ್ನು ಹೊರಡಿಸಿದೆ ಎಂದು ಸಚಿವ ಶಿವಾನಂದ ಪಾಟೀಲ್ ಸಾಮಾಜಿಕ ಜಾಲತಾಣದ ಮೂಲಕ ಮಾಹಿತಿ ಹಂಚಿಕೊಂಡಿದ್ದಾರೆ.

<><><>

ಉತ್ತರ ಭಾರತದ ಬಯಲುಸೀಮೆಗೆ ಸೀಮಿತವೆಂದು ಭಾವಿಸಲಾದ, ತೀವ್ರ ಚಳಿ, ಶೀತಗಾಳಿ ಹಾಗೂ ದಟ್ಟವಾದ ಮಂಜು, ಬೆಂಗಳೂರು ಸೇರಿದಂತೆ, ಉಷ್ಣ ವಲಯದ ಹಲವು ರಾಜ್ಯಗಳು ಮತ್ತು ಜಿಲ್ಲೆಗಳಲ್ಲಿ ಈ ಬಾರಿ ಅನುಭವಕ್ಕೆ ಬಂದಿದೆ. ಹವಾಮಾನ ವಿಜ್ಞಾನಿಗಳ ಪ್ರಕಾರ, ಈ ಬದಲಾವಣೆ ಅಸಹಜ ವಿದ್ಯಮಾನವಲ್ಲ. ಬದಲಾಗಿ, ವಾತಾವರಣದ ಮೂಲಭೂತ ಭೌತಶಾಸ್ತ್ರದ

ನಿಯಮಗಳ ಸಹಜ ಮತ್ತು ನಿಖರ ಪರಿಣಾಮಗಳಾಗಿವೆ ಎಂದು, ಅಭಿಪ್ರಾಯಪಟ್ಟಿದ್ದಾರೆ ಬೆಂಗಳೂರಿನ ಹವಾಮಾನ ಕೇಂದ್ರದ ಹಿರಿಯ ವಿಜ್ಞಾನಿ, ಸಿ.ಎಸ್.ಪಾಟೀಲ.

<><><>

ಸಿ.ಎಸ್.ಪಾಟೀಲ ಧ್ವನಿ – 43 ಸೆಕೆಂದುಗಳು

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

- ಚಿತ್ರದುರ್ಗದ ಹಿರಿಯೂರು ಬಳಿ ಖಾಸಗಿ ಬಸ್ ಅಪಘಾತ; 11 ಕ್ಕೂ ಹೆಚ್ಚು ಪ್ರಯಾಣಿಕರು ಸಜೀವ ದಹನದ ಶಂಕೆ.
- ಮಂಗನ ಕಾಯಿಲೆ ನಿಯಂತ್ರಣಕ್ಕೆ ಕ್ರಮ; ಉತ್ತರ ಕನ್ನಡ ಜಿಲ್ಲೆಯ ಶಿರಸಿಯಲ್ಲಿ ನೂತನ ಪ್ರಯೋಗಾಲಯ ಶೀಘ್ರದಲ್ಲೇ ಪ್ರಾರಂಭ.
- ಗ್ರಾಹಕರ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಲು ರಾಜ್ಯ ಗ್ರಾಹಕ ವ್ಯವಹಾರಗಳ ಇಲಾಖೆಯಿಂದ ಯೋಜನೆ.
- ಇಂದು ನಾಡಿನಾದ್ಯಂತ ಸಂಭ್ರಮದ ಕ್ರಿಸ್ಮಸ್ ಆಚರಣೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ.

<><><>